**ಪ್ರಧಾನ ಸಿವಿಲ್ ನ್ಯಾಯಾಧೀಶರ ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಹೆಗ್ಗಡದೇವನಕೋಟೆ, ಮೈಸೂರು ಜಿಲ್ಲೆ.**

**O.S. No. 127/2024**

ಸಾಕ್ಷಿಯನ್ನು ದಿನಾಂಕಃ 29.11.2025 ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆಃ ವಾದಿಗಳ ಪರ ಶ್ರೀ. ಬಿ.ವಿ.ಎಸ್. ವಕೀಲರಿಂದಃ**

ಈ ದಾವೆಯಲ್ಲಿ ನಾನು ವಾದಿಯಾಗಿರುತ್ತೇನೆ. ನನ್ನ ಮುಖ್ಯ ವಿಚಾರಣೆಯ ಬದಲಾಗಿ ಪ್ರಮಾಣ ಪತ್ರ ಸಲ್ಲಿಸಿದ್ದು, ಸದರಿ ಪ್ರಮಾಣ ಪತ್ರದಲ್ಲಿರುವ ಅಂಶಗಳನ್ನು ನಾನೇ ಖುದ್ದಾಗಿ ಬರೆಸಿರುತ್ತೇನೆ ಹಾಗೂ ಅದರಲ್ಲಿರುವ ಅಂಶಗಳು ಸತ್ಯವೆಂದು ಪ್ರಮಾಣೀಕರಿಸುತ್ತೇನೆ. ಅದರಲ್ಲಿರುವ ಸಹಿ ನನ್ನದೇ ಆಗಿರುತ್ತದೆ.

ನನ್ನ ದಾವೆಯ ಜೊತೆ ಕೆಲವು ದಾಖಲೆಗಳನ್ನು ಹಾಜರುಪಡಿಸಿರುತ್ತೇನೆ.

ವಂಶವೃಕ್ಷ ಪ್ರಮಾಣ ಪತ್ರವನ್ನು ಹಾಜರುಪಡಿಸಿದ್ದು ಅದನ್ನು **ನಿ.ಪಿ.–1** ಎಂದು, 01 ಗಣಕೀಕೃತ ಪಹಣಿ ಪತ್ರಿಕೆಯನ್ನು ಹಾಜರುಪಡಿಸಿದ್ದು ಅದನ್ನು **ನಿ.ಪಿ.–2** ಎಂದು, ಆಕಾರ್ ಬಂದ್ ನ ಧೃಡೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು **ನಿ.ಪಿ.–3** ಎಂದು, 03 ಸರ್ವೆ ಸ್ಕೆಚ್ ಗಳ ಧೃಡೀಕೃತ ನಕಲುಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಕ್ರಮವಾಗಿ **ನಿ.ಪಿ.–4 ರಿಂದ ನಿ.ಪಿ.–6** ಎಂದು, ಮ್ಯುಟೇಷನ್ ಆದೇಶದ ಧೃಡೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು **ನಿ.ಪಿ.–7** ಎಂದು, 03 ಕೈ-ಬರಹದ ಪಹಣಿ ಪತ್ರಿಕೆಗಳ ಧೃಡೀಕೃತ ನಕಲುಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಕ್ರಮವಾಗಿ **ನಿ.ಪಿ.–8 ರಿಂದ ನಿ.ಪಿ.–10** ಎಂದು ಮತ್ತು ಅಸಲು ದಾವೆ ಸಂಖ್ಯೆಃ 229/2018ರ ಆದೇಶ ಪ್ರತಿಯ ಧೃಡೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು **ನಿ.ಪಿ.–11** ಎಂದು ಗುರುತಿಸಲಾಯಿತು.

**ಈ ಹಂತದಲ್ಲಿ ವಾದಿ ಪರ ವಕೀಲರು ಮುಂದುವರೆದ ಮುಖ್ಯ ವಿಚಾರಣೆಗೆ ಸಮಯಾವಕಾಶವನ್ನು ಕೋರಿದ್ದು, ಸಮಯಾವಕಾಶವನ್ನು ನೀಡಿ ಮುಂದೂಡಲಾಯಿತು.**

(ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.)

**ಓ ಹೇ ಕೇ ಸಾ ಸ ಇ ಒ.,**

**ಪ್ರಧಾನ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ.,**
**ಹೆಗ್ಗಡದೇವನಕೋಟೆ.**